ಆ) –ಅದೇ–

351 (655) ಶ್ರೀ ಗೋಪಾಲಕೃಷ್ಣ ಬೇಳೂರು ಬಿ ಕೆ (ಸಾಗರ) ಪೂಜಾರಿ ಕೆ (ಬೈಂದೂರು) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ಜಿಲ್ಲೆ ಸಾಗರದ ಮೆಸ್ಕಾಂ ಉಪ ವಿಭಾಗದಲ್ಲಿ 1800 ವಿದ್ಯುತ್ ಕಂಬಗಳು ಹಾಗೂ 70 ಪರಿವರ್ತಕ (ಡಿ ಟಿ ಸಿ ಗಳು)ಗಳ ಕೊರತೆಯಿಂದಾಗಿ ಸಾರ್ವಜನಿಕರಿಗೆ ವಿದ್ಯುತ್ ಸಂಪರ್ಕದಲ್ಲಿ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ಕಂಬಗಳನ್ನು ಹಾಗೂ ಪರಿವರ್ತಕಗಳನ್ನು ಕೂಡಲೇ ಸರಬರಾಜು ಮಾಡಲು ಸರ್ಕಾರ ಕೈಗೊಂಡ ಕ್ರಮವೇನು,

ಇ) ನಿರ್ದಿಷ್ಟ ಕಾಲಮಿತಿಯಲ್ಲಿ ಕಂಬಗಳು ಹಾಗೂ ಪರಿವರ್ತಕಗಳನ್ನು ಸರಬರಾಜು ಮಾಡಲಾಗುವುದೇ?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) :

ಅ) ಮತ್ತು ಆ) ಶಿವಮೊಗ್ಗ ಜಿಲ್ಲೆಯ ಸಾಗರದ ಮೆಸ್ಕಾಂ ವಿಭಾಗಕ್ಕೆ 4711 ಸಂಖ್ಯೆಗಳ ವಿವಿಧ ರೀತಿಯ/ಉದ್ದದ ಕಂಬಗಳ ಸರಬರಾಜಿಗಾಗಿ ಖರೀದಿ ಆದೇಶವನ್ನು ಈಗಾಗಲೇ ನೀಡಲಾಗಿದ್ದು ಅದರಲ್ಲಿ ಸಾಗರ ಉಪ ವಿಭಾಗಕ್ಕೆ ಒಟ್ಟು 1018 ಕಂಬಗಳನ್ನು ಹಂಚಿಕೆ ಮಾಡಲಾಗಿದ್ದು, ಕಂಬಗಳ ಸರಬರಾಜು ಪ್ರಕ್ರಿಯೆಯು ಪ್ರಗತಿಯಲ್ಲಿದೆ 2006–07ನೇ ಸಾಲಿನಲ್ಲಿ ವಿವಿಧ ಕಾಮಗಾರಿಗಳ ಅಡಿಯಲ್ಲಿ ಸಾಗರ ಉಪವಿಭಾಗದಲ್ಲಿ ಒಟ್ಟು 47 ಸಂಖ್ಯೆಗಳ ಹೊಸ ವಿದ್ಯುತ್ ಪರಿವರ್ತಕಗಳನ್ನು ಈಗಾಗಲೇ ಸ್ಥಾಪಿಸಲಾಗಿದೆ ಅದರಲ್ಲಿ ವ್ಯವಸ್ಥೆ ಸುಧಾರಣೆಯಲ್ಲಿಯೇ 36 ಸಂಖ್ಯೆಗಳ ವಿದ್ಯುತ್ ಪರಿವರ್ತಕಗಳನ್ನು ಅಳವಡಿಸಲಾಗಿದೆ ಸಾಗರ ಉಪವಿಭಾಗಕ್ಕೆ ಸಂಬಂಧಿಸಿದಂತೆ ಒಟ್ಟು 70 ವಿದ್ಯುತ್ ಪರಿವರ್ತಕಗಳ ಬೇಡಿಕೆಗೆ ಪೂರಕವಾಗಿ 47 ವಿದ್ಯುತ್ ಪರಿವರ್ತಕಗಳನ್ನು ಈಗಾಗಲೇ ಒದಗಿಸಲಾಗಿದ್ದು, ಇನ್ನೂ 23 ವಿದ್ಯುತ್ ಪರಿವರ್ತಕಗಳನ್ನು ಆದ್ಯತೆಯ ಮೇರೆಗೆ ಪೂರ್ಣಗೊಳ್ಳುವ ಕಾಮಗಾರಿಗಳಿಗೆ ಒದಗಿಸಲಾಗುವುದು

ಇ) ನಿರ್ದಿಷ್ಟ ಕಾಲಮಿತಿಯಲ್ಲಿ ಕಂಬಗಳು ಮತ್ತು ಪರಿವರ್ತಕಗಳನು ಸರಬರಾಜು ಮಾಡಲು ಮಂಗಳೂರು ವಿದ್ಯುತ್ ಸರಬರಾಜು ಕಂಪನಿಯು ಈಗಾಗಲೇ ಕ್ರಮಗಳನ್ನು ಕೈಗೊಂಡಿರುತ್ತದೆ

BLINK

BLINK

ಈ) ಆಯವ್ಯಯದಲ್ಲಿ ಎಷ್ಟು ಹಣವನ್ನು ಇದಕ್ಕಾಗಿ ನಿಗಧಿಪಡಿಸಲಾಗುವುದು,

ಉ) ರಾಜ್ಯ ಸರ್ಕಾರವು ಕಳೆದ ಸಾಲುಗಳಲ್ಲಿ ಬಡ್ಡಿ ಮನ್ನಾ ಮಾಡಿರುವುದು ನಿಜವಲ್ಲವೇ,

ಊ) ಹಾಗಿದ್ದಲ್ಲಿ ಇದಕ್ಕಾಗಿ ಸರ್ಕಾರವು ಸಹಕಾರ ಸಂಸ್ಥೆಗಳಿಗೆ ಎಷ್ಟು ಹಣವನ್ನು ತುಂಬಿಕೊಟ್ಟಿದೆ,

ಋ) ಇನ್ನೂ ಎಷ್ಟು ಹಣವನ್ನು ಕೊಡಬೇಕಾಗಿದೆ,

ಋಾ) ಈ ಹಣವನ್ನು ಯಾವ ರೀತಿ ಹೊಂದಾಣಿಕೆ ಮಾಡಿ ಕೊಡಲಾಗುವುದು,

ಎ) ಸರ್ಕಾರದ ಪರವಾಗಿ ಮುಖ್ಯಮಂತ್ರಿ ಹಾಗು ಉಪಮುಖ್ಯಮಂತ್ರಿಗಳು ಈ ಬಗ್ಗೆ ಸತತವಾಗಿ ಹೇಳಿಕೆಗಳನ್ನು ನೀಡುತ್ತಿರುವುದರಿಂದ ಸಾಲ ಪಡೆದಿರುವ ರೈತರು ಸಾಲ ಮರುಪಾವತಿ ಮಾಡುವಲ್ಲಿ ವಿಳಂಬ ಮಾಡುತ್ತಿರುವ ಪ್ರಯುಕ್ತ ಸಹಕಾರ ಸಂಘ–ಸಂಸ್ಥೆಗಳು ತೀರಾ ಸಂಕಷ್ಟದ ಪರಿಸ್ಥಿತಿಯನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಜಿ ಟಿ ದೇವೇಗೌಡ (ಸಹಕಾರ ಸಚಿವರು) .

ಅ) ಸಹಕಾರಿ ಸಂಸ್ಥೆಗಳು ರೈತರಿಗೆ ನೀಡಿರುವ ಕೃಷಿ ಸಾಲಗಳನ್ನು ಮನ್ನಾ ಮಾಡುವ ಪ್ರಸ್ತಾವವು ಸರ್ಕಾರದ ಪರಿಶೀಲನೆಯಲ್ಲಿ ಇರುತ್ತದೆ

ಆ) –ಅದೇ–

ಇ) –ಅದೇ–

ಈ) –ಅದೇ–

ಉ) ಹೌದು

ಊ) ಬಡ್ಡಿ ಮತ್ತು ದಂಡೆದ ಬಡ್ಡಿ ಮನ್ನಾ ಯೋಜನೆಯಡಿಯಲ್ಲಿ ಅಲ್ಪಾವಧಿ ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಸಾಲಗಳ ಬಾಬ್ತು ಸರ್ಕಾರವು ಸಹಕಾರ ಸಂಸ್ಥೆಗಳಿಗೆ ಒಟ್ಟು ರೂ 1000–00ಕೋಟಿ ಸಹಾಯಧನವನ್ನು ಬಿಡುಗಡೆ ಮಾಡಿದೆ

ಋ) ಇನ್ನು ಸುಮಾರು ರೂ 16863–00 ಲಕ್ಷಗಳನ್ನು ಕೊಡಬೇಕಾಗಿದೆ

ಋಾ) ಬಿಡುಡೆಗೆ ಬಾಕಿ ಇರುವ ಬಡ್ಡಿ ಮನ್ನಾ ಮೊಬಲಗನ್ನು ಆಯವ್ಯಯದ ಹಂಚಿಕೆ ಮೂಲಕ ಕೊಡಲಾಗುವುದು

ಎ) ಸಾಲ ಮರುಪಾವತಿಯ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ

354 (663) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರ್‌ದ್) ಮಾನ್ಯ ಗೃಹ, ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ದ್ವಿಚಕ್ರ ವಾಹನ ಸವಾರರಿಗೆ ಎಂದಿನಿಂದ ಹೆಲ್ಮೆಟ್ ಕಡ್ಡಾಯಗೊಳಿಸಲಾಯಿತು ಇದು ರಾಜ್ಯದ ಯಾವ ಯಾವ ಜಿಲ್ಲೆಗೆ ಅನ್ವಯವಾಗುತ್ತದೆ ಹಾಗೂ ಯಾವ ಯಾವ ಜಿಲ್ಲೆಗಳಿಗೆ ಇದಕ್ಕೆ ವಿನಾಯಿತಿ ನೀಡಲಾಗಿದೆ, ವಿನಾಯಿತಿ ನೀಡುವಾಗ ಅನುಸರಿಸಿದ ಮಾನದಂಡಗಳೇನು,

ಆ) ಗುಲ್ಬರ್ಗಾದಲ್ಲಿ ಹೆಚ್ಚಿನ ಬಿಸಿಲಿನ ತಾಪಮಾನವಿದ್ದರೂ ಸಹ ಇಲ್ಲಿಗೆ ನೀಡದೆ, ಬಳ್ಳಾರಿಗೆ ವಿನಾಯಿತಿ ನೀಡಿ ತಾರತಮ್ಯ ಮಾಡಲು ಕಾರಣಗಳೇನು,

ಇ) ರಾಜ್ಯದಲ್ಲಿ ಹೆಲ್ಮೆಟ್ ಧಾರಣೆಯನ್ನು ಕಡ್ಡಯವಾಗಿರುವುದನ್ನು ರದ್ದುಪಡಿಸಿ ಹೆಲ್ಮೆಟ್ ಧರಿಸುವುದನ್ನು ದ್ವಿಚಕ್ರ ವಾಹನ ಸವಾರರ ಇಷ್ಟಕ್ಕೆ ಬಿಡುವ ಬಗ್ಗೆ ಸರ್ಕಾರ ಆದೇಶ ಹೊರಡಿಸುತ್ತದೆಯೇ, ಹಾಗಿಲ್ಲದಿದ್ದಲ್ಲಿ ಕಾರಣಗಳೇಣು?

ಶ್ರೀ ಎಂ ಪಿ ಪ್ರಕಾಶ್ (ಗೃಹ, ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು)

ಅ) ರಾಜ್ಯದಲ್ಲಿ ದ್ವಿಚಕ್ರ ವಾಹನ ಸವಾರರಿಗೆ 1 11 2006 ರಿಂದ ಹೆಲ್ಮೆಟ್ ಕಡ್ಡಾಯ ಗೊಳಿಸಲಾಯಿತು ದ್ವಿಚಕ್ರ ವಾಹನ ಸವಾರರು ರಸ್ತೆ ಅಪಘಾತಗಳಲ್ಲಿ ಮರಣ ಹಾಗೂ ಗಾಯಗೊಂಡಿರುವ ಅಂಕಿಅಂಶಗಳ ಆಧಾರದ ಮೇಲೆ ಬೆಂಗಳೂರು, ಮೈಸೂರು, ಹುಬ್ಬಳ್ಳಿ–ದಾರವಾಡ, ಬೆಳಗಾವಿ, ಗುಲ್ಬರ್ಗಾ ಹಾಗೂ ಮಂಗಳೂರು ಮಹಾನಗರಪಾಲಿಕೆಗಳ ವ್ಯಾಪ್ತಿಯಲ್ಲಿ ಹೆಲ್ಮೆಟ್ ಕಡ್ಡಾಯಗೊಳಿಸಲಾಗಿದೆ

ಆ) ದ್ವಿಚಕ್ರ ವಾಹನ ಸವಾರರು ರಸ್ತೆ ಅಪಘಾತಗಳಲ್ಲಿ ಮರಣ ಹಾಗೂ ಗಾಯ ಗೊಂಡಿರುವ ಅಂಕಿಅಂಶಗಳ ಆಧಾರದ ಮೇಲೆ ಗುಲ್ಬರ್ಗಾ ಮಹಾನಗರದ ವ್ಯಾಪ್ತಿಯಲ್ಲಿ ಹೆಲ್ಮೆಟ್ ಕಡ್ಡಾಯಗೊಳಿಸಲಾಗಿದೆ

ಇ) ಇಲ್ಲ